JANUARY 21,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಸ್ಥಾಪಿಸಲಾದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುತ್ಥಳಿ ಅನಾವರಣ ಕಾರ್ಯಕ್ರಮ ಆರಂಭಗೊಂಡಿದ್ದು, ಪ್ರಗತಿಯಲ್ಲಿದೆ. ರಾಜ್ಯಸಭೆಯ ವಿಪಕ್ಷ ನಾಯಕ ಹಾಗೂ ಎ.ಐ.ಸಿ.ಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭಾ ಸಂಸದೆ ಪ್ರಿಯಾಂಕಾ ವಾದ್ರಾ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಕೇಂದ್ರ ಹಾಗೂ ರಾಜ್ಯದ ಗಣ್ಯರು ಪಾಲ್ಗೊಂಡಿದ್ದಾರೆ. ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ, 1924 ರಲ್ಲಿ ನಡೆದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ನ ಶತಮಾನೋತ್ಸವದ ಅಂಗವಾಗಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ನಗರದ ಸಿಪಿಇಡಿ ಮೈದಾನದಲ್ಲಿ ಆಯೋಜಿಸಲಾಗಿರುವ ಜೈ ಬಾಪು, ಜೈ ಭೀಮ, ಜೈ ಸಂವಿಧಾನ ಸಮಾವೇಶಕ್ಕೆ 1 ಗಂಟೆಗೆ ಚಾಲನೆ ದೊರೆಯಲಿದೆ.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾಗಿರುವ ರಾಷ್ಟ್ರೀಯ ಶಿಕ್ಷಣ ನೀತಿ ಅಡಿ ಜಾರಿಗೆ ಬಂದಿರುವ, ವಿದ್ಯಾರ್ಥಿಗಳ ವಿಶೇಷ ಗುರುತಿನ ಚೀಟಿ 'ಅಪಾರ್' ಕಾರ್ಡ್ ನೋಂದಣಿ ಪ್ರಕ್ರಿಯೆಯು ಶಿಕ್ಷಣ ಇಲಾಖೆ ಮೂಲಕ ವಿಜಯಪುರ ಜಿಲ್ಲೆಯಲ್ಲಿ ಪ್ರಗತಿಯಲ್ಲಿದೆ. ಈ ಕುರಿತು ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ತಸ್ನೀಮ್. ಎಸ್ ಕೋಲ್ಹಾರ ಅವರು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ

<><><>

ಬೈಟ್: ತಸ್ನೀಮ್. ಎಸ್. ಕೋಲ್ಹಾರ 38 ಸೆಕೆಂದುಗಳು

<><><>

ಬದುಕಿನ ಸಾರ್ಥಕತೆಗೆ ಅಗತ್ಯವಾದ ನೀತಿ ಹಾಗೂ ಅರಿವಿನ ಬೆಳಗನ್ನು ತುಂಬುವ, ಮನುಕುಲದ ಆಚಾರ ಸಂಹಿತೆ 'ಶ್ರೀಸಿದ್ಧಾಂತ ಶಿಖಾಮಣಿ' ಎಂದು ಕಾಶಿ ಜ್ಞಾನ ಪೀಠದ ಜಗದ್ಗುರು ಡಾಕ್ಟರ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ನುಡಿದರು. ಉತ್ತರಪ್ರದೇಶದ ಪ್ರಯಾಗರಾಜ ತ್ರಿವೇಣಿ ಸಂಗಮದಲ್ಲಿ ಜರುಗುತ್ತಿರುವ ಮಹಾಕುಂಭಮೇಳದ ಅಂಗವಾಗಿ ದಶಾಶ್ವಮೇಧ ಘಾಟನಲ್ಲಿರುವ, ತಮ್ಮ ಧರ್ಮಪೀಠದ ಶಾಖಾಮಠದಲ್ಲಿ ಆಯೋಜಿಸಲಾದ, 44 ದಿನಗಳ ತಪೋನು  ್ಠಾನ ಹಾಗೂ ಧರ್ಮ ಚಿಂತನ ಸಮಾವೇಶದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ದ್ವೈತ  ಹಾಗೂ ಅದ್ವೈತ ಸಿದ್ಧಾಂತಗಳ ಸಮನ್ವಯ ಸಾರವಾಗಿರುವ 'ಶ್ರೀಸಿದ್ಧಾಂತ ಶಿಖಾಮಣಿ'ಯು ಮನುಕುಲದ ಅಭ್ಯುದಯಕ್ಕೆ ಪೂರಕವಾಗಿದೆ ಎಂದರು.

<><><>

ಕಲಬುರಗಿ ಜಿಲ್ಲೆಯಾದ್ಯಂತ, 2024–25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ ಆರಂಭವಾಗಿದೆ. ಜಿಲ್ಲೆಯಲ್ಲಿ 177 ಖರೀದಿ ಕೇಂದ್ರಗಳನ್ನು ಗುರುತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ. ರಾಜ್ಯಾದ್ಯಂತ ಎಫ್.ಎ.ಕ್ಯೂ. ಗುಣಮಟ್ಟದ 3 ಲಕ್ಷದ 6 ಸಾವಿರದ 150 ಮೆಟ್ರಿಕ್ ಟನ್ ತೊಗರಿ ಖರೀದಿಗೆ ಸರ್ಕಾರ ಆದೇಶಿಸಿದ್ದು, ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್ ತೊಗರಿಗೆ 7 ಸಾವಿರದ 550 ರೂಪಾಯಿ ನಿಗದಿಪಡಿಸಲಾಗಿದೆ ಎಂದರು.

<><><>

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಲದ ವತಿಯಿಂದ, ಬೆಳಗಾವಿ ವಿಭಾಗದ ಆಯ್ದ ಪತ್ತಿನ ಸಹಕಾರ ಸಂಘಗಳ ಪದಾಧಿಕಾರಿಗಳು ಹಾಗೂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮಕ್ಕೆ ಕೆ.ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವರಾಮ್ ಹೆಬ್ಬಾರ್ ಶಿರಸಿಯಲ್ಲಿ ನಿನ್ನೆ ಚಾಲನೆ ನೀಡಿದರು.

<><><>

ಕುವೆಂಪು ವಿಶ್ವವಿದ್ಯಾಲಯದ 34ನೇ ಘಟಿಕೋತ್ಸವ ಹಾಗೂ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ 9ನೇ ಘಟಿಕೋತ್ಸವಗಳು, ಇದೇ 22 ರಂದು ನಡೆಯಲಿವೆ.

<><><>

ಹಾವೇರಿ ಜಿಲ್ಲೆಯ ರಾಣೇಬೆನ್ನೂರಿನ ಸ್ನೇಹದೀಪ ಅಂಧ ವಿಶೇಷಚೇತನರ ಸಂಸ್ಥೆ,  2024–25ನೇ ಶೈಕ್ಷಣಿಕ ವರ್ಷದಲ್ಲಿ 10ನೇ ತರಗತಿ ಉತ್ತೀರ್ಣರಾದ ಅಂಧ ವಿದ್ಯಾರ್ಥಿಗಳಿಗೆ ಉಚಿತ ಊಟ, ವೈದ್ಯಕೀಯ, ವಸತಿಯೊಂದಿಗೆ ಪ್ರಥಮ ಪಿ.ಯು.ಸಿ.ಯಿಂದ ಪದವಿಯವರೆಗೆ ಉಚಿತವಾಗಿ ಕಾಲೇಜು ಶಿಕ್ಷಣವನ್ನು ಒದಗಿಸುತ್ತಿದೆ. ಸಂಸ್ಥೆಯಲ್ಲಿ ಉದ್ಯೋಗ ಆಧಾರಿತ ತರಬೇತಿ ನೀಡಲಾಗುತ್ತಿದ್ದು, ಅರ್ಹರು ಪ್ರಯೋಜನ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><><>

ಬಳ್ಳಾರಿಯಲ್ಲಿ ಕೃಷಿ ಇಲಾಖೆಯಿಂದ ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆ ಆಯೋಜಿಸಲಾಯಿತು. ಕೃಷಿ ಇಲಾಖೆಯ ನೌಕರರು, ಶಾಲಾ ಮಕ್ಕಳು, ರೈತ ಮುಖಂಡರು ಇದರಲ್ಲಿ ಪಾಲ್ಗೊಂಡು, ಸಿರಿ ಧಾನ್ಯ ಬಳಕೆಯಿಂದ ಆರೋಗ್ಯದ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಫಲಕಗಳನ್ನು ಹಿಡಿದು ಸಾಗಿದರು.

<><><>

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಒಲಿಂಪಿಕ್ಸ್ ಅಸೋಸಿಯೇಶನ್ ಸಹಯೋಗದಲ್ಲಿ, ಉಡುಪಿಯ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಕರ್ನಾಟಕ ಕ್ರೀಡಾಕೂಟದ, ಮಹಿಳೆಯರ 65 ರಿಂದ 70 ಕಿಲೋಗ್ರಾಂ, ಬಾಕ್ಸಿಂಗ್ ಸ್ಪರ್ಧೆಯಲ್ಲಿ, ಶಿವಮೊಗ್ಗದ ನಿವೇದಿತಾ ಆರ್. ಪ್ರಥಮ ಸ್ಥಾನ ಪಡೆದು, ಚಿನ್ನದ ಪದಕ ಜಯಿಸಿದ್ದಾರೆ. ಪುರುಷರ 60 ರಿಂದ 65 ಕಿಲೋಗ್ರಾಂ ತೂಕ ವಿಭಾಗದ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಸಮೃದ್ಧ ಅವರು ಕಂಚಿನ ಪದಕ ಜಯಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>